APRIL 17, 2024

ALL INDIA RADIO- DHARWAD

PRADESH SAMACHARA (KANNADA) 7:05 AM

<><><>

ಆಕಾಶವಾಣಿ–ಪ್ರದೇಶ ಸಮಾಚಾರ

<><><>

ಓದಿದವರು: ಹರ್ಷವರ್ಧನ ಶೀಲವಂತ

<><><>

ಆತ್ಮೀಯ ಆಕಾಶವಾಣಿ ಕೇಳುಗರಿಗೆಲ್ಲ, ಶ್ರೀ ರಾಮ ನವಮಿಯ ಹಾರ್ದಿಕ ಶುಭಾಶಯಗಳು.

<><><>

ಮುಖ್ಯಾಂಶಗಳು:

- ಇಂದು ಶ್ರೀರಾಮ ನವಮಿ; ಶ್ರೀರಾಮನ ಜನ್ಮ ದಿನವನ್ನು ದೇಶಾದ್ಯಂತ ಶ್ರದ್ಧಾ, ಭಕ್ತಿಯಿಂದ ಆಚರಣೆ.
- 2023 ರ ನಾಗರಿಕ ಸೇವಾ ಪರೀಕ್ಷೆಯ ಅಂತಿಮ ಫಲಿತಾಂಶ ಪ್ರಕಟ; ರಾಜ್ಯದ 25ಕ್ಕೂ ಹೆಚ್ಚು ಅಭ್ಯರ್ಥಿಗಳು ಯಶಸ್ವಿ.
- 18ನೇ ಸಾರ್ವತ್ರಿಕ ಲೋಕಸಭೆ ಚುನಾವಣೆ; ಸ್ವೀಪ್ ಚಟುವಟಿಕೆ ಮೂಲಕ, ಮತದಾರ ಜಾಗ್ರತಿ.
- ಬಾಹ್ಯಾಕಾಶ ಏಜನ್ಸಿಗಳ, ವಾರ್ಷಿಕ ಸಮನ್ವಯ ಸಮಿತಿ ಸಭೆ, ಬೆಂಗಳೂರಿನಲ್ಲಿ ಆರಂಭ.

<><><>

ಈಗ ವಾರ್ತೆಗಳ ವಿವರ

<><><>

ಇಂದು ಶ್ರೀ ರಾಮ ನವಮಿ; 2024ರ ಚೈತ್ರ ಮಾಸದ ಶುಕ್ಲ ಪಕ್ಷದ ಒಂಭತ್ತನೇ ದಿನ, ಭಗವಾನ್ ಶ್ರೀರಾಮನ ಜನ್ಮ ದಿನವನ್ನು ದೇಶಾದ್ಯಂತ ಶ್ರದ್ಧಾ, ಭಕ್ತಿಯಿಂದ ಆಚರಿಸಲಾಗುತ್ತಿದೆ. ರಾಜ್ಯದ ಶ್ರೀ ರಾಮ ಮಂದಿರಗಳಲ್ಲಿ ವಿಶೇಷ ಪೂಜಾ ಕೈಂಕರ್ಯ ನಡೆದಿವೆ. ಚೈತ್ರ ಮಾಸದ ಶುಕ್ಲ ಪಕ್ಷದ ಪಾಡ್ಯದಿಂದ, ನವಮಿ ವರೆಗೆ ರಾಮಾಯಣವನ್ನು ಭಕ್ತಿ, ಶ್ರದ್ಧೆಗಳಿಂದ ಪಾರಾಯಣ ಮಾಡಿ, ನವಮಿ ದಿನ, ಶ್ರೀ ರಾಮ ಪಟ್ಟಾಭಿ ೀಕ ಪಾರಾಯಣ ಮಾಡಿ, ಹಬ್ಬದಾಚರಣೆ ಪೂರ್ಣಗೊಳಿಸಲಾಗುತ್ತದೆ. ಶ್ರೀರಾಮ ಜನಿಸಿದ ಸ್ಥಳ ಅಯೋಧ್ಯೆಯ ನೂತನ ರಾಮ ಲಲ್ಲಾ ಮಂದಿರದಲ್ಲಿ, ಇಂದು ವಿಜೃಂಭಣೆಯಿಂದ ಧಾರ್ಮಿಕ ವಿಧಿ ವಿಧಾನಗಳು ಜರುಗುತ್ತಿವೆ. ಲಕ್ಷಾಂತರ ಭಕ್ತಾದಿಗಳು, ದರ್ಶನಾಕಾಂಕ್ಷಿಯಾಗಿ ಸರದಿಯಲ್ಲಿ ಸಾಗುತ್ತಿದ್ದಾರೆ. ರಾಮ ಮಂದಿರಗಳಲ್ಲಿ ಕೋಸಂಬರಿ, ಮಜ್ಜಿಗೆ ಹಾಗೂ ಪಾನಕ ಹಂಚುವ ಮೂಲಕ ಸೌಹಾರ್ದತೆ ಮೆರೆದು, ವಸುಧೈವ ಕುಟುಂಬಕಂ, ಇಡೀ ವಿಶ್ವವೇ ಒಂದು ಕುಟುಂಬ ಎಂಬುದನ್ನು ಜಗತ್ತಿಗೆ ಸಾರಿ ಹೇಳುವ ಹಬ್ಬವಾಗಿ ಆಚರಿಸಲ್ಪಡುತ್ತಿದೆ.

<><><>

ಕೇಂದ್ರ ಲೋಕಸೇವಾ ಆಯೋಗ–ಯು.ಪಿ.ಎಸ್.ಸಿ. ನಡೆಸಿದ್ದ, 2023ನೇ ಸಾಲಿನ ನಾಗರಿಕ ಸೇವಾ ಪರೀಕ್ಷೆಗಳ ಫಲಿತಾಂಶ ಪ್ರಕಟವಾಗಿದ್ದು, ಕಾನ್ಪುರ ಐ.ಐ.ಟಿ.ಯಲ್ಲಿ ಅಧ್ಯಯನ ಮಾಡಿರುವ, ಆದಿತ್ಯ ಶ್ರೀವಾಸ್ತವ ಅಗ್ರಸ್ಥಾನ ಪಡೆದಿದ್ದಾರೆ.

ಸದ್ಯ ಲಭ್ಯವಿರುವ ಮಾಹಿತಿ ಪ್ರಕಾರ, ರಾಜ್ಯದ 25ಕ್ಕೂ ಹೆಚ್ಚು ಅಭ್ಯರ್ಥಿಗಳು ಈ ಬಾರಿ ಯಶಸ್ಸು ಗಳಿಸಿದ್ದಾರೆ. ಆ ಪೈಕಿ, ಮೊದಲ 25 ಜನರಲ್ಲಿ 10 ಮಂದಿ ಮಹಿಳೆಯರಿದ್ದಾರೆ.

ವಿಜಯಪುರ ಜಿಲ್ಲೆಯ ದೇವರಹಿಪ್ಪರಗಿ ತಾಲೂಕಿನ ಜಾಲವಾದದ ವಿಜೇತಾ ಹೊಸಮನಿ 100ನೇ ರ್‍ಯಾಂಕ್ ಪಡೆದು, ರಾಜ್ಯಕ್ಕೆ ಪ್ರಥಮ ಸ್ಥಾನ ಗಳಿಸಿದ್ದಾರೆ.

ಧಾರವಾಡದ ಕೃಷಿ ವಿಶ್ವವಿದ್ಯಾಲಯದ ಬಿ.ಎಸ್ಸಿ. ಎಗ್ರೀ ವಿದ್ಯಾರ್ಥಿನಿ ದಾವಣಗೆರೆಯ ಸೌಭಾಗ್ಯ ಬೀಳಗಿಮಠ 101ನೇ ರ್‍ಯಾಂಕ್ ಪಡೆದಿದ್ದಾರೆ.

ಕೋಲಾರ ಜಿಲ್ಲೆ ಮುಳಬಾಗಿಲು ತಾಲೂಕಿನ ತಿಮ್ಮನಾಯಕನ ಹಳ್ಳಿಯ ನಾಗೇಂದ್ರಬಾಬು ಕುಮಾರ್ 160ನೇ ರ್‍ಯಾಂಕ್ ಗಳಿಸಿದ್ದಾರೆ.

ಒಟ್ಟು ಸಾವಿರದ 16 ಅಭ್ಯರ್ಥಿಗಳು ಆಯ್ಕೆಯಾಗಿದ್ದು, ಆ ಪೈಕಿ 347 ಮಂದಿ ಸಾಮಾನ್ಯ ವರ್ಗದವರು, 115 ಜನ ಆರ್ಥಿಕವಾಗಿ ದುರ್ಬಲ ವರ್ಗದವರು, 303 ಇತರ ಹಿಂದುಳಿದ ವರ್ಗದವರು, ಪರಿಶಿಷ್ಟ ಜಾತಿಗೆ ಸೇರಿದ 165 ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ 86 ಜನ ಯಶಸ್ವಿ ಅಭ್ಯರ್ಥಿಗಳಿದ್ದಾರೆ ಎಂದು ಯು.ಪಿ.ಎಸ್.ಸಿ. ತಿಳಿಸಿದೆ.

ಪ್ರಧಾನಮಂತ್ರಿ ನರೇಂದ್ರ ಮೋದಿ, ಅಭಿನಂದನೆ ಸಲ್ಲಿಸಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ರಾಷ್ಟ್ರಪತಿ ಭವನದಲ್ಲಿ ಭಾರತೀಯ ಆರ್ಥಿಕ ಸೇವೆಯ ಪ್ರಶಿಕ್ಷಣಾರ್ಥಿಗಳನ್ನು ಭೇಟಿ ಮಾಡಿ, ಸಂವಾದ ನಡೆಸಿದರು.

<><><>

ಕೊಪ್ಪಳ ಜಿಲ್ಲೆ, ಸ್ವೀಪ್ ಸಮಿತಿ, ಪ್ರಸ್ತುತ ಲೋಕಸಭಾ ಚುನಾವಣೆಯಲ್ಲಿ, ಮತದಾನ ಪ್ರಮಾಣ ಹೆಚ್ಚಿಸಲು, ವಿಶಿಷ್ಟ ವ್ಯಕ್ತಿಗಳನ್ನು ಗುರುತಿಸಿ, ಚುನಾವಣಾ ರಾಯಬಾರಿಗಳನ್ನಾಗಿ ನೇಮಿಸಿದೆ. ಸಮಾಜದ ಮುಖ್ಯವಾಹಿನಿಗೆ ಸೇರಿ, ಬದುಕು ಕಟ್ಟಿಕೊಂಡ, ಲಿಂಗತ್ವ ಅಲ್ಪಸಂಖ್ಯಾತ ಸಮುದಾಯದ ರಮ್ಯಾ ಅವರು, ಚುನಾವಣಾ ರಾಯಬಾರಿಗಳ ಪೈಕಿ ಒಬ್ಬರು. ಪ್ರದೇಶ ಸಮಾಚಾರಕ್ಕಾಗಿ ಅವರು ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><>

ಲಿಂಗತ್ವ ಅಲ್ಪ ಸಂಖ್ಯಾತ ಸಮುದಾಯದ ರಮ್ಯಾ 40 ಸೆಕೆಂದುಗಳು

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಚಿತ್ರದುರ್ಗ ಜಿಲ್ಲೆಯ ಹೊಸದುರ್ಗದಲ್ಲಿ, ಕಡಿಮೆ ಮತದಾನವಾದ ಮತಗಟ್ಟೆಗಳಲ್ಲಿ, ಸ್ವೀಪ್ ತಂಡದ ವತಿಯಿಂದ, ಬೈಕ್ ಜಾಥಾ ಆಯೋಜಿಸಲಾಗಿತ್ತು.

ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿ, ಮತದಾರರನ್ನು ಆಕರ್ಷಿಸಲು, 60ಕ್ಕೂ ಅಧಿಕ ವಿಶೇ ´ ಮತಗಟ್ಟೆಗಳನ್ನು ಸ್ಥಾಪಿಸಲಾಗುತ್ತಿದೆ ಎಂದು, ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಸುರೇಶ್ ಇಟ್ನಾಳ್ ತಿಳಿಸಿದ್ದಾರೆ.

ಲೋಕಸಭೆ ಚುನಾವಣೆ ಹಿನ್ನೆಲೆ, ಗದಗ ಜಿಲ್ಲೆ, ನರಗುಂದ ತಾಲೂಕು, ಕಲಕೇರಿ ಗ್ರಾಮದಲ್ಲಿ, ರಾಷ್ಟ್ರ ಮಟ್ಟದ ಕಬ್ಬಡ್ಡಿ ಪಟುಗಳಾದ ಪ್ರೇಮಾ ಪಾಟೀಲ್, ನಿರ್ಮಲಾ ಪರಮೇಶ್ವರ್ ಹಾಗೂ ಮೇಘಾ ಮಳ್ಳಸಿದ್ಧನವರ, ಮತದಾನದ ಜಾಗ್ರತಿಯಲ್ಲಿ ಪಾಲ್ಗೊಂಡಿದ್ದರು.

ಬೆಳಗಾವಿಯ ಕಿಲ್ಲಾ ಕೋಟೆಯ ದುರ್ಗಾದೇವಿ ಮಂದಿರದ ಆವರಣದಲ್ಲಿ, ಮತದಾನ ಜಾಗೃತಿ ಕಾಲ್ನಡಿಗೆ ಜಾಥಾಕ್ಕೆ, ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ರಾಹುಲ್ ಶಿಂಧೆ, ಚಾಲನೆ ನೀಡಿದರು.

ಬಿಸಿಲಿನ ಬೇಗೆ ತೀವ್ರವಾಗಿದ್ದು, ಬಾಯಾರಿಕೆ ನೀಗಿಸಲು, ಆಯು ˜ ಇಲಾಖೆ ಪರಿಚಯಿಸಿರುವ, ಹುಣಸೆ ಹಣ್ಣಿನ ಚಿಂಚಾ ಪಾನಕವನ್ನು ಸೇವಿಸುವಂತೆ, ಬೆಳಗಾವಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸಲಹೆ ನೀಡಿದ್ದಾರೆ.

ಬಾಗಲಕೋಟೆ ಜಿಲ್ಲೆಯ ಎಲ್ಲ ಅರ್ಹ ಮತದಾರರು, ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಿ, ತಪ್ಪದೇ ತಮ್ಮ ಹಕ್ಕನ್ನು ಚಲಾಯಿಸಿ, ಪ್ರಜಾಪ್ರಭುತ್ವದ ಹಬ್ಬವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಜಾನಕಿ ಕೆ.ಎಂ. ಕೋರಿದ್ದಾರೆ.

ಬಸ್ ಪ್ರಯಾಣಿಕರಲ್ಲಿ ಮತದಾನದ ಜಾಗೃತಿ ಮೂಡಿಸಲು, ಮೆಹಂದಿ ಕಾರ್ಯಾಗಾರ ಹಾಗೂ ರಂಗೋಲಿ ಸ್ಪರ್ಧೆಯನ್ನು, ಧಾರವಾಡದ ಹೊಸ ಬಸ್ ನಿಲ್ದಾಣದಲ್ಲಿ ಏರ್ಪಡಿಸಲಾಗಿತ್ತು.

<><><>

ಬಾಹ್ಯಾಕಾಶ ಅಂತರ್ ಏಜನ್ಸಿಗಳ ಸಮನ್ವಯ ಸಮಿತಿಯ 42ನೇ ವಾರ್ಷಿಕ ಸಭೆ, ಬೆಂಗಳೂರಿನಲ್ಲಿ ಆರಂಭವಾಗಿದ್ದು, ಮೂರು ದಿನಗಳ ಕಾಲ ನಡೆಯಲಿದೆ.

ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ – ಇಸ್ರೋ ಅಧ್ಯಕ್ಷ ಡಾಕ್ಟರ್ ಎಸ್. ಸೋಮನಾಥ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ಬಾಹ್ಯಾಕಾಶ ಪ್ರಯಾಣ ಕೈಗೊಂಡಿರುವ, ವಿವಿಧ ರಾಷ್ಟ್ರಗಳ ಬಾಹ್ಯಾಕಾಶ ಸಂಸ್ಥೆಗಳ ಭಾಗೀದಾರರ ಸಮಾವೇಶ ಇದಾಗಿದ್ದು, ಬಾಹ್ಯಾಕಾಶದಲ್ಲಿ ಹೆಚ್ಚುತ್ತಿರುವ ದಟ್ಟಣೆ ಮತ್ತು ಸವಾಲುಗಳನ್ನು ಸಮರ್ಥವಾಗಿ ಎದುರಿಸುವ ಸಂಬಂಧ, ಸುಸ್ಥಿರತೆ ಮತ್ತು ಸುರಕ್ಷತೆ ಖಾತ್ರಿ ಪಡಿಸಲು, ಸಭೆಯಲ್ಲಿ ಸಮಾಲೋಚನೆ ನಡೆಸಲಾಗುವುದು ಎಂದು, ಇಸ್ರೋ ಅಧ್ಯಕ್ಷ ಎಸ್. ಸೋಮನಾಥ ತಿಳಿಸಿದ್ದಾರೆ.

<><><>

ಧಾರವಾಡದ ಹಿರಿಯ ಚಿಂತಕ ಡಾಕ್ಟರ್ ಎಂ. ವಾಯ್. ಸಾವಂತ ಅವರಿಗೆ, ಬೆಳಗಾವಿಯ ಡಾಕ್ಟರ್ ಬೆಟಗೇರಿ ಕೃಷ್ಣಶರ್ಮ ಸ್ಮಾರಕ ಟ್ರಸ್ಟ್ 'ಆನಂದ ಕಂದ' ಪ್ರಶಸ್ತಿಯನ್ನು ನೀಡಿ ಗೌರವಿಸುತ್ತಿದೆ. ಇಂದು ಸಂಜೆ 6 ಗಂಟೆಗೆ, ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ, ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿತವಾಗಿದೆ. ಮೂಡಿ ಲಿಪಿ ಓದಬಲ್ಲ ಕೆಲವೇ ಇತಿಹಾಸಕಾರರಲ್ಲಿ ಓರ್ವರಾದ ಪ್ರೊಫೆಸರ್ ಎಂ.ವಾಯ್.ಸಾವಂತ, ಪೇಶ್ವೆಗಳ ಆಳ್ವಿಕೆಯ ಕಾಲದ ಧಾರವಾಡದ ಬಗ್ಗೆ ಆಳವಾದ ಅಧ್ಯಯನ ಕೈಗೊಂಡ, ಇತಿಹಾಸ ತಜ್ಞ, ಪ್ರದೇಶ ಸಮಾಚಾರಕ್ಕಾಗಿ, ಪ್ರೊಫೆಸರ್ ಎಂ.ವಾಯ್. ಸಾವಂತ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಪ್ರೊ. ಎಂ.ವಾಯ್. ಸಾವಂತ 40 ಸೆಕೆಂದುಗಳು

<><><>

ನಟ, ನಿರ್ದೇಶಕ, ನಿರ್ಮಾಪಕರಾಗಿ ಬಹುಕಾಲ ಕನ್ನಡ ಚಿತ್ರರಂಗದ ಸೇವೆಗೈದ ಕನ್ನಡಿಗರ ಪ್ರೀತಿಯ, 'ಪ್ರಚಂಡ ಕುಳ್ಳ' ದ್ವಾರಕೀಶ್ ಅವರ ನಿಧನದ ಸುದ್ದಿ ತಿಳಿದು, ದುಃಖವಾಯಿತು ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಸಂತಾಪ ವ್ಯಕ್ತ ಪಡಿಸಿದ್ದಾರೆ.

<><><>

ದ್ವಾರಕೀಶ್ ಅವರ ನಿಧನಕ್ಕೆ, ಮಾಜಿ ಪ್ರಧಾನಮಂತ್ರಿ ಎಚ್.ಡಿ.ದೇವೇಗೌಡ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಸಚಿವ ಸಂತೋಷ ಲಾಡ್ ಸೇರಿದಂತೆ, ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.

<><><>

ಉತ್ತರಕರ್ನಾಟಕದ ಬೆಳಗಾವಿ, ವಿಜಯಪುರ, ಕಲಬುರಗಿ, ಯಾದಗಿರಿ, ರಾಯಚೂರು ಹಾಗೂ ಕೊಪ್ಪಳ ಜಿಲ್ಲೆಗಳಿಂದ ಗೋವೆಗೆ ವಲಸೆ ಹೋಗಿ ಅಲ್ಲಿಯೇ ಹಲವಾರು ದಶಕಗಳಿಂದ ಸಾವಿರಾರು ಕನ್ನಡಿಗರ ಕುಟುಂಬಗಳು ಬದುಕು ಕಟ್ಟಿಕೊಂಡಿವೆ. ಸಾಂಗೋಡ್ಲಾದಲ್ಲಿ ವಾಸವಾಗಿದ್ದ 600ಕ್ಕೂ ಹೆಚ್ಚು ಜನ ಕನ್ನಡಿಗರನ್ನು ಗೋವಾ ಸರ್ಕಾರ ಹೊರಹಾಕುವ ಕಾರ್ಯಾಚರಣೆಯನ್ನು, ಕಳೆದ 12ನೇ ತಾರೀಖಿನಿಂದ ಆರಂಭಿಸಿರುವುದು ಸಲ್ಲ ಎಂದು, ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘ ಪ್ರಕಟಣೆಯಲ್ಲಿ ತಿಳಿಸಿದೆ.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ವಿವಿಧ ವೃತ್ತಿಪರ ಕೋರ್ಸ್‌ಗಳಿಗೆ, ನಾಳೆ ಮತ್ತು ನಾಡಿದ್ದು, ರಾಜ್ಯದ 31 ಜಿಲ್ಲೆಗಳ ಪರೀಕ್ಷಾ ಕೇಂದ್ರಗಳಲ್ಲಿ, ಸಿ.ಇ.ಟಿ – ಸಾಮಾನ್ಯ ಪ್ರವೇಶ ಪರೀಕ್ಷೆಗಳು ನಡೆಯಲಿವೆ.

<><><>

ದಕ್ಷಿಣಕನ್ನಡ ಜಿಲ್ಲೆಯಲ್ಲಿ ಎಂಡೋಸಲ್ಫಾನ್ ಸಂತ್ರಸ್ತರಿಗಾಗಿ, ಆರೋಗ್ಯ ತಪಾಸಣಾ ಶಿಬಿರವನ್ನು ಬೆಳ್ತಂಗಡಿ ತಾಲೂಕಿನ ವಿವಿಧೆಡೆ ಇಂದು ಆಯೋಜಿಸಲಾಗಿದೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಇಂದು ಶ್ರೀರಾಮ ನವಮಿ; ಶ್ರೀರಾಮನ ಜನ್ಮ ದಿನವನ್ನು ದೇಶಾದ್ಯಂತ ಶ್ರದ್ಧಾ, ಭಕ್ತಿಯಿಂದ ಆಚರಣೆ.
- 2023 ರ ನಾಗರಿಕ ಸೇವಾ ಪರೀಕ್ಷೆಯ ಅಂತಿಮ ಫಲಿತಾಂಶ ಪ್ರಕಟ; ರಾಜ್ಯದ 25ಕ್ಕೂ ಹೆಚ್ಚು ಅಭ್ಯರ್ಥಿಗಳು ಯಶಸ್ವಿ.
- 18ನೇ ಸಾರ್ವತ್ರಿಕ ಲೋಕಸಭೆ ಚುನಾವಣೆ; ಸ್ವೀಪ್ ಚಟುವಟಿಕೆ ಮೂಲಕ, ಮತದಾರ ಜಾಗ್ರತಿ.
- ಬಾಹ್ಯಾಕಾಶ ಏಜನ್ಸಿಗಳ, ವಾರ್ಷಿಕ ಸಮನ್ವಯ ಸಮಿತಿ ಸಭೆ, ಬೆಂಗಳೂರಿನಲ್ಲಿ ಆರಂಭ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.**

<><><>

ಹರ್ಷ